# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಪದವಿ ಪೂರ್ವ ಶಿಕ್ಷಣದ ವಾಣಿಜ್ಯ ವಿಭಾಗದಲ್ಲಿ ಸಮಾಜಶಾಸ್ತ್ರ ವಿಷಯವನ್ನೊಳಗೊಂಡ ಹೊಸ ಸಂಯೋಜನೆಯನ್ನು ಅಳವಡಿಸುವ ಬಗ್ಗೆ.

ಓದಲಾಗಿದೆ:- ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ರವರ ಪತ್ರ ಸಂಖ್ಯೆ:ಪಪೂಶಿ/ಶೈ.ಶಾ/ಎಸ್.ಎಸ್./ಸ.ವಿ.ಅ/2015-16 ದಿನಾಂಕ:27-07-2018.

* * *

**ಪ್ರಸ್ತಾವನೆ:**

ಮೇಲೆ ಓದಲಾದ ನಿರ್ದೇಶಕರ ಪತ್ರದಲ್ಲಿ ಪದವಿ ಪೂರ್ವ ಶಿಕ್ಷಣದ ವಾಣಿಜ್ಯ ವಿಭಾಗದಲ್ಲಿ ಸಮಾಜಶಾಸ್ತ್ರ ವಿಷಯವನ್ನೊಳಗೊಂಡ ಹೊಸ ಸಂಯೋಜನೆಯನ್ನು ಅಳವಡಿಸುವ ಕುರಿತಂತೆ ಈ ಕೆಳಕಂಡ ಅಂಶಗಳೊಂದಿಗೆ ವರದಿ ಸಲ್ಲಿಸಿರುತ್ತಾರೆ.

1. ಸಮಾಜಶಾಸ್ತ್ರ ವಿಷಯವು 1979-80ರವರೆಗೆ ಪದವಿ ಪೂರ್ವ ಶಿಕ್ಷಣದ ವಾಣಿಜ್ಯ ವಿಭಾಗದ ಐಚ್ಛಿಕ ವಿಷಯವಾಗಿರುತ್ತದೆ. ಸದರಿ ಅವಕಾಶವು ರದ್ದಾಗಿರುವ ಬಗ್ಗೆ ಯಾವುದೇ ಆದೇಶ ಲಭ್ಯವಿರುವುದಿಲ್ಲ.

2. ಸಮಾಜಶಾಸ್ತ್ರವನ್ನು ವಾಣಿಜ್ಯ ವಿಭಾಗದ ಒಂದು ಐಚ್ಛಿಕ ವಿಷಯವನ್ನಾಗಿ ಸೇರ್ಪಡೆಗೊಳಿಸಬಹುದಾಗಿದೆ.

3. ಸಮಾಜಶಾಸ್ತ್ರವನ್ನು ವಾಣಿಜ್ಯ ವಿಭಾಗದ ಐಚ್ಛಿಕ ವಿಷಯವನ್ನಾಗಿ ಸೇರ್ಪಡೆಗೊಳಿಸಿದಲ್ಲಿ ಸಮಾಜಶಾಸ್ತ್ರ ವಿಷಯದಲ್ಲಿ ಆಸಕ್ತಿ ಇರುವ ವಿದ್ಯಾರ್ಥಿಗಳಿಗೆ ಅನುಕೂಲವಾಗುತ್ತದೆ.

4. ಪ್ರೌಢ ಶಿಕ್ಷಣ ಹಂತದಲ್ಲಿ ಸಮಾಜ ವಿಜ್ಞಾನ ವಿಷಯದಲ್ಲಿ ಸಮಾಜಶಾಸ್ತ್ರವನ್ನು ಬೋಧಿಸಲಾಗುತ್ತಿದೆ.

5. ಪ್ರಸ್ತುತ ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ಸಮಾಜಶಾಸ್ತ್ರದಲ್ಲಿ 1160 ಹುದ್ದೆಗಳು ಮಂಜೂರಾಗಿದ್ದು, ಸದರಿ ವಿಷಯವನ್ನು ವಾಣಿಜ್ಯ ವಿಭಾಗದ ಒಂದು ಐಚ್ಛಿಕ ವಿಷಯವನ್ನಾಗಿ ಸೇರ್ಪಡೆಗೊಳಿಸಿದಲ್ಲಿ ಯಾವುದೇ ರೀತಿಯಲ್ಲಿ ಆರ್ಥಿಕ ಹೊರೆಯಾಗುವುದಿಲ್ಲ.

ಮೇಲಿನ ಮಾಹಿತಿ ಅಲ್ಲದೆ, ಈ ಕುರಿತಂತೆ ತಜ್ಞರ ಅಭಿಪ್ರಾಯ ಪಡೆಯಲು ದಿನಾಂಕ:23-07-2018ರಂದು ನಡೆದ ಶಿಕ್ಷಣ ತಜ್ಞರು, ಹಿರಿಯ ಉಪನ್ಯಾಸಕರು, ಪ್ರಾಂಶುಪಾಲರ ಸಭೆಯಲ್ಲಿ ಸಮಾಜಶಾಸ್ತ್ರವನ್ನು ವಾಣಿಜ್ಯ ವಿಭಾಗದಲ್ಲಿ ಒಂದು ವಿಷಯವಾಗಿ ಅಳವಡಿಸಬಹುದೆಂದು ಅಭಿಪ್ರಾಯಪಟ್ಟಿದೆ. ಅಲ್ಲದೆ, ದಿನಾಂಕ:30-05-2018ರಂದು ನ್ಯಾಷನಲ್ ಎಜುಕೇಷನ್ ಸೊಸೈಟಿ ಆಫ್ ಕರ್ನಾಟಕ(ರಿ), ಬೆಂಗಳೂರು ಈ ಸಂಸ್ಥೆಯ ಮಾನ್ಯ ರಿಜಿಸ್ಟ್ರಾರ್‌ರವರು ಸಮಾಜಶಾಸ್ತ್ರವು ಒಂದು ಪ್ರಮುಖ ಸಮಾಜ ವಿಜ್ಞಾನವಾಗಿದ್ದು, ಸದರಿ ವಿಷಯವನ್ನು ವಾಣಿಜ್ಯ ವಿಭಾಗದ ಒಂದು ಐಚ್ಛಿಕ ವಿಷಯವಾಗಿ ಸೇರ್ಪಡೆಗೊಳಿಸುವುದು ಪ್ರಸ್ತುತ ಸಾಮಾಜಿಕ ಸಂದರ್ಭದಲ್ಲಿ ಅನಿವಾರ್ಯವೆಂದು ಶಿಫಾರಸ್ಸು ಮಾಡಿರುತ್ತಾರೆ. ಈ ಹಿನ್ನೆಲೆಯಲ್ಲಿ ಯಾವುದೇ ಆರ್ಥಿಕ ಹೊರೆಯಾಗದಂತೆ ಇರುವ ಸಂಪನ್ಮೂಲವನ್ನು ಬಳಸಿಕೊಂಡು ಸರ್ಕಾರಿ/ಅನುದಾನಿತ/ಅನುದಾನರಹಿತ ಕಾಲೇಜುಗಳ ವಾಣಿಜ್ಯ ವಿಭಾಗದಲ್ಲಿ 2019-20ನೇ ಸಾಲಿನಿಂದ ಸಮಾಜಶಾಸ್ತ್ರ ವಿಷಯವನ್ನು ಅಧ್ಯಯನ ಮಾಡಲು ವಿದ್ಯಾರ್ಥಿಗಳಿಗೆ ಅವಕಾಶ ನೀಡಬಹುದಾಗಿದೆ ಎಂದು ನಿರ್ದೇಶಕರು ಶಿಫಾರಸ್ಸು ಮಾಡಿರುತ್ತಾರೆ.

ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆರವರ ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ..

**ಸರ್ಕಾರದ ಆದೇಶ ಸಂಖ್ಯೆ: ಇಡಿ 34 ಟಿಪಿಯು 2018,**
**ಬೆಂಗಳೂರು, ದಿನಾಂಕ: 18-09-2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದಾಗಿ, ಪದವಿ ಪೂರ್ವ ಶಿಕ್ಷಣದ ವಾಣಿಜ್ಯ ಸಂಯೋಜನೆಯಲ್ಲಿ ಸಮಾಜಶಾಸ್ತ್ರವನ್ನು ಒಂದು ವಿಷಯವಾಗಿ 2019-20ನೇ ಸಾಲಿನಿಂದ ಜಾರಿಗೆ ಬರುವಂತೆ ಅಳವಡಿಸಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಶೇಖರ) 18/09/2018
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ(ಪದವಿ ಪೂರ್ವ ಶಿಕ್ಷಣ)

ಇವರಿಗೆ:-

1) ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ 18ನೇ ಕ್ರಾಸ್, ಬೆಂಗಳೂರು.
2) ಎಲ್ಲಾ ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ.
3) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.